**All India Radio: Bangalore**
**National Bulletin In Kannada**
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**07.05.2026 19.35 p.m.**

---

ಮುಖ್ಯಾಂಶಗಳು

೧. ತಮಿಳುನಾಡಿನಲ್ಲಿ ಹೊಸ ಪಕ್ಷ ಅಧಿಕಾರಕ್ಕೆ ಬರಬೇಕೆಂಬ ಜನಾದೇಶಕ್ಕೆ ಗೌರವ, ಎಐಎಡಿಎಂಕೆ ಜೊತೆ ಮಾತುಕತೆ ಇಲ್ಲ - ಡಿಎಂಕೆ ಮುಖ್ಯಸ್ಥ ಎಂ.ಕೆ.ಸ್ಟಾಲಿನ್

೨. ಬಿಹಾರದಲ್ಲಿ ಸಚಿವ ಸಂಪುಟ ವಿಸ್ತರಣೆ; ಮೂವತ್ತೆರಡು ಸಚಿವರ ಪದಗ್ರಹಣ

೩. ಆಪರೇಷನ್ ಸಿಂದೂರ; ಭಯೋತ್ಪಾದನೆ ವಿರುದ್ಧ ರಕ್ಷಿಸಿಕೊಳ್ಳುವ ಎಲ್ಲ ಹಕ್ಕನ್ನು ರಾಷ್ಟ್ರ ಹೊಂದಿದೆ - ಭಾರತ ಪ್ರತಿಪಾದನೆ

೪. ಐಪಿಎಲ್ ಟಿ-೨೦ ಕ್ರಿಕೆಟ್: ಲಖನೌ ಸೂಪರ್ ಜೈಂಟ್ಸ್ ವಿರುದ್ಧ ಟಾಸ್ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫೀಲ್ಡಿಂಗ್ ಆಯ್ಕೆ

---

ತಮಿಳುನಾಡಿನಲ್ಲಿ ರಾಜಕೀಯ ಬಿಕ್ಕಟ್ಟಿನ ನಡುವೆ ಹೊಸ ಸರ್ಕಾರ ರಚನೆಗೆ ಕಸರತ್ತು ಮುಂದುವರಿದಿದೆ.

ರಾಜ್ಯಪಾಲ ರಾಜೇಂದ್ರ ಹರ್ಲೇಕರ್ ಅವರು ಇಂದು ಟಿವಿಕೆ ವರಿಷ್ಠ ಜೋಸೆಫ್ ವಿಜಯ್ ಅವರನ್ನು ಲೋಕಭವನಕ್ಕೆ ಆಹ್ವಾನಿಸಿದ್ದರು.

ಸರ್ಕಾರ ರಚಿಸಲು ಅಗತ್ಯವಿರುವ ಬಹುಮತದ ಬೆಂಬಲವನ್ನು ಸಾಬೀತುಪಡಿಸುವಂತೆ ರಾಜ್ಯಪಾಲರು ವಿಜಯ್ ಅವರಿಗೆ ವಿವರಿಸಿದ್ದಾರೆ ಎಂಬುದಾಗಿ ಲೋಕಭವನದ ಪ್ರಕಟಣೆ ತಿಳಿಸಿದೆ. ಚುನಾವಣೆ ಫಲಿತಾಂಶ ಘೋಷಣೆಯಾದ ನಂತರ ಇದು ಅವರ ಎರಡನೇ ಭೇಟಿಯಾಗಿದೆ.

ಇನ್ನೊಂದೆಡೆ, ತಮಿಳುನಾಡಿನಲ್ಲಿ ಹೊಸ ಪಕ್ಷ ಅಧಿಕಾರಕ್ಕೆ ಬರಬೇಕೆಂಬ ಜನಾದೇಶವನ್ನು ಡಿಎಂಕೆ ಗೌರವಿಸುತ್ತದೆ. ಮತ್ತೊಂದು ಸಾಂವಿಧಾನಿಕ ಬಿಕ್ಕಟ್ಟು ಅಥವಾ ಚುನಾವಣೆಯನ್ನು ಬಯಸುವುದಿಲ್ಲ ಎಂದು ಡಿಎಂಕೆ ಮುಖ್ಯಸ್ಥ ಎಂ.ಕೆ.ಸ್ಟಾಲಿನ್ ಹೇಳಿದ್ದಾರೆ.

ನೂತನ  ಸರ್ಕಾರ ರಚನೆಗೆ ಡಿಎಂಕೆ ಯಾವುದೇ ರೀತಿಯ ಅಡ್ಡಿಯುಂಟು ಮಾಡುವುದಿಲ್ಲ ಎಂದ ಅವರು, ನೂತನ ಸರ್ಕಾರ ರಚನೆಗೆ ತಮ್ಮ ಪಕ್ಷ ಎಐಎಡಿಎಂಕೆ ಜೊತೆ ಮಾತುಕತೆ ನಡೆಸುತ್ತಿದೆ ಎಂಬ ವದಂತಿಗಳನ್ನು ತಳ್ಳಿಹಾಕಿದರು.

---

ಬಿಹಾರ ಮುಖ್ಯಮಂತ್ರಿ ಸಾಮ್ರಾಟ್ ಚೌಧರಿ ಇಂದು ತಮ್ಮ ಸಚಿವ ಸಂಪುಟವನ್ನು ವಿಸ್ತರಿಸಿದರು.

ಪಾಟ್ನಾದ ಗಾಂಧಿ ಮೈದಾನದಲ್ಲಿ ನಡೆದ ಸಮಾರಂಭದಲ್ಲಿ, ರಾಜ್ಯಪಾಲ ನಿವೃತ್ತ ಲೆಫ್ಟಿನೆಂಟ್ ಜನರಲ್ ಸೈಯದ್ ಅತಾ ಹಸ್ನೈನ್ ಅವರು ಹೊಸದಾಗಿ ನೇಮಕಗೊಂಡ ಮೂವತ್ತೆರಡು ಸಚಿವರಿಗೆ ಅಧಿಕಾರ ಮತ್ತು ಗೌಪ್ಯತೆಯನ್ನು ಬೋಧಿಸಿದರು.

ಬಿಜೆಪಿಯ ಹದಿನೈದು ಶಾಸಕರು, ಜೆಡಿಯು ನಿಂದ ಹದಿಮೂರು, ರಾಮ್ ವಿಲಾಸ್ ಬಣದ ಲೋಕ ಜನಶಕ್ತಿ ಪಕ್ಷದಿಂದ ಇಬ್ಬರು ಹಾಗೂ ಹಿಂದೂಸ್ತಾನಿ ಅವಾಮ್ ಮೋರ್ಚಾ ಮತ್ತು ರಾಷ್ಟ್ರೀಯ ಲೋಕ ಮೋರ್ಚಾದಿಂದ ತಲಾ ಒಬ್ಬರು ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದರು.

ಜೆಡಿಯು ಅಧ್ಯಕ್ಷ ನಿತೀಶ್ ಕುಮಾರ್ ಅವರ ಪುತ್ರ ನಿಶಾಂತ್ ಕುಮಾರ್ ಕೂಡ ನೂತನ ಸಂಪುಟಕ್ಕೆ ಸೇಪಡೆಯಾಗಿದ್ದು, ಈ ಮೂಲಕ ಜೆಡಿಯು ನ ಒಟ್ಟು ಸಚಿವರ ಸ್ಥಾನ ೧೫ಕ್ಕೆ ಏರಿಕೆಯಾಗಿದೆ.

ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸಚಿವರಾದ ರಾಜನಾಥ್ ಸಿಂಗ್, ಅಮಿತ್ ಶಾ ಮತ್ತು ಜೆ.ಪಿ. ನಡ್ಡಾ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್, ಜೆಡಿಯು ರಾಷ್ಟ್ರೀಯ ಅಧ್ಯಕ್ಷ ನಿತೀಶ್ ಕುಮಾರ್ ಸೇರಿದಂತೆ ಎನ್‌ಡಿಎ ನಾಯಕರು ಉಪಸ್ಥಿತರಿದ್ದರು.

---

ಅಸ್ಸಾಂ, ಪಶ್ಚಿಮ ಬಂಗಾಳ, ತಮಿಳುನಾಡು, ಕೇರಳ ಮತ್ತು ಪುದುಚೇರಿ ಹಾಗೂ ಉಪಚುನಾವಣೆಗಳು ನಡೆದ ರಾಜ್ಯಗಳಲ್ಲಿ ಜಾರಿಯಲ್ಲಿದ್ದ ಮಾದರಿ ನೀತಿ ಸಂಹಿತೆಯನ್ನು ತೆಗೆದುಹಾಕಲಾಗಿದೆ.

ಕೇಂದ್ರ ಸಂಪುಟ ಕಾರ್ಯದರ್ಶಿ, ರಾಜ್ಯ ಮುಖ್ಯ ಕಾರ್ಯದರ್ಶಿಗಳು ಮತ್ತು ಮುಖ್ಯ ಚುನಾವಣಾ ಅಧಿಕಾರಿಗಳಿಗೆ ರವಾನಿಸಿರುವ ಪತ್ರದಲ್ಲಿ, ಈ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ವಿಧಾನಸಭಾ ಚುನಾವಣೆಯ ಫಲಿತಾಂಶಗಳು ಘೋಷಣೆಯಾಗಿರುವುದರಿಂದ, ಮಾದರಿ ನೀತಿ

ಸಂಹಿತೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ತೆಗೆದುಹಾಕಲಾಗಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ.

ಆದಾಗ್ಯೂ, ಪಶ್ಚಿಮ ಬಂಗಾಳದ ಫಾಲ್ಟಾ ವಿಧಾನಸಭಾ ಕ್ಷೇತ್ರದಲ್ಲಿ ಹೊಸದಾಗಿ ಚುನಾವಣೆಗೆ ಆದೇಶಿಸಿರುವುದರಿಂದ, ಆ ಕ್ಷೇತ್ರದಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುತ್ತದೆ ಎಂದು ಆಯೋಗ ತಿಳಿಸಿದೆ. ಫಾಲ್ಟಾ ವಿಧಾನಸಭಾ ಕ್ಷೇತ್ರದ ಮತದಾನ ಈ ತಿಂಗಳ ೨೧ ರಂದು ನಡೆಯಲಿದ್ದು, ಮತ ಎಣಿಕೆ ಇದೇ ೨೪ ರಂದು ನಡೆಯಲಿದೆ.

---

ಆಪರೇಷನ್ ಸಿಂದೂರ ಕಾರ್ಯಾಚರಣೆಯ ಮೊದಲ ವಾರ್ಷಿಕೋತ್ಸವವನ್ನು ಆಚರಿಸಲಾಗುತ್ತಿದೆ. ಈ ಕಾರ್ಯಾಚರಣೆಯು ಭಯೋತ್ಪಾದನೆ, ದೇಶದ ಸಾರ್ವಭೌಮತ್ವ ಮತ್ತು ನಾಗರಿಕರ ಸುರಕ್ಷತೆಗೆ ಬೆದರಿಕೆ ಒಡ್ಡುವ ಎಲ್ಲ ಶಕ್ತಿಗಳಿಗೆ ತಕ್ಕ ಪ್ರತ್ಯುತ್ತರ ನೀಡುವ ಸಂಕಲ್ಪದ ನಿರ್ಣಾಯಕ ನಿದರ್ಶನವಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ.

ಆಪರೇಷನ್ ಸಿಂದೂರ ಕಾರ್ಯಾಚರಣೆಯು ಭಾರತದ ಶಾಂತಿ, ಏಕತೆ ಮತ್ತು ಸಾರ್ವಭೌಮತ್ವ ಕದಡಲು ಪ್ರಯತ್ನಿಸುತ್ತಿರುವ ಭಯೋತ್ಪಾದಕ ಶಕ್ತಿಗಳು ಮತ್ತು ಭಯೋತ್ಪಾದನೆ ಪ್ರಾಯೋಜಕ ದೇಶಗಳಿಗೆ ಭಾರತ ದೃಢವಾಗಿ ಪ್ರತಿಕ್ರಿಯಿಸಿದ ನಿರ್ಣಾಯಕ ಕ್ಷಣವಾಗಿದೆ ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಹೇಳಿದ್ದಾರೆ.

ಒಂದು ವರ್ಷದ ಹಿಂದೆ ಭಾರತದ ಸಶಸ್ತ್ರ ಪಡೆಗಳು, ಆಪರೇಷನ್ ಸಿಂದೂರ ಸಮಯದಲ್ಲಿ ತೋರಿದ ಅಪ್ರತಿಮ ಧೈರ್ಯ, ನಿಖರತೆ ಮತ್ತು ದೃಢ ಸಂಕಲ್ಪವನ್ನು ಮರೆಯಲಾಗದು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಪಹಲ್ಗಾಮ್‌ನಲ್ಲಿ ಮುಗ್ಧ ಭಾರತೀಯರ ಮೇಲೆ ದಾಳಿ ಮಾಡಲು ಧೈರ್ಯ ಮಾಡಿದವರಿಗೆ ಸಶಸ್ತ್ರ ಪಡೆಗಳು ತಕ್ಕ ಪಾಠ ಕಲಿಸಿವೆ. ಅದಕ್ಕಾಗಿ ಇಡೀ ರಾಷ್ಟ್ರ ಭಾರತದ ಪಡೆಗಳ ಶೌರ್ಯಕ್ಕೆ ವಂದಿಸುತ್ತದೆ ಎಂದು ಅವರು ತಿಳಿಸಿದ್ದಾರೆ.

ಆಪರೇಷನ್ ಸಿಂದೂರ-ಪಾಕಿಸ್ತಾನದಿಂದ ಗಡಿಯಾಚೆಗಿನ ಭಯೋತ್ಪಾದನೆಯ ವಿರುದ್ಧ ತನ್ನನ್ನು ತಾನು ರಕ್ಷಿಸಿಕೊಳ್ಳುವ ರಾಷ್ಟ್ರದ ಸಂಕಲ್ಪವನ್ನು ಪ್ರದರ್ಶಿಸಿತು ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಹೇಳಿದ್ದಾರೆ.

---

ಗಡಿಯಾಚೆಗಿನ ಭಯೋತ್ಪಾದನೆಯನ್ನು ಪ್ರಾಯೋಜಿಸಿದ್ದಕ್ಕಾಗಿ ಆಪರೇಷನ್ ಸಿಂದೂರ ಸಮಯದಲ್ಲಿ ಪಾಕಿಸ್ತಾನಕ್ಕೆ ಸೂಕ್ತ ಉತ್ತರ ನೀಡಿರುವುದಾಗಿ ಭಾರತ ಹೇಳಿದೆ.

ನವದೆಹಲಿಯಲ್ಲಿಂದು ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಗಡಿಯಾಚೆಗಿನ ಭಯೋತ್ಪಾದನೆಯನ್ನು ಪಾಕಿಸ್ತಾನ ಬಹಳ ಹಿಂದಿನಿಂದಲೂ ತನ್ನ ರಾಜನೀತಿಯ ಸಾಧನವಾಗಿ ಬಳಸುತ್ತಿದೆ ಎಂದು ದೂರಿದರು.

ಭಯೋತ್ಪಾದನೆಯ ವಿರುದ್ಧ ತನ್ನನ್ನು ತಾನು ರಕ್ಷಿಸಿಕೊಳ್ಳುವ ಎಲ್ಲ ಹಕ್ಕನ್ನು ಭಾರತ ಹೊಂದಿದೆ ಮತ್ತು ಭಯೋತ್ಪಾದನೆಯ ವಿರುದ್ಧ ಜಾಗತಿಕ ಹೋರಾಟವನ್ನು ಬಲಪಡಿಸಲು ಕೆಲಸ ಮಾಡುವುದನ್ನು ಮುಂದುವರಿಸುತ್ತದೆ ಎಂದು ಅವರು ಹೇಳಿದರು.

ಕೆನಡಾದಲ್ಲಿ ಖಲಿಸ್ತಾನಿ ಗುಂಪುಗಳ ಕುರಿತ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಉಗ್ರಗಾಮಿ ಮತ್ತು ಪ್ರತ್ಯೇಕತಾವಾದಿ ಗುಂಪುಗಳು ಕೆನಡಾದ ಪ್ರದೇಶವನ್ನು ಸುರಕ್ಷಿತ ಸ್ವರ್ಗವಾಗಿ ಬಳಸುವ ಬಗ್ಗೆ ಭಾರತ ನಿರಂತರವಾಗಿ ಕಳವಳ ವ್ಯಕ್ತಪಡಿಸಿದೆ ಎಂದು ತಿಳಿಸಿದರು.

ತನ್ನ ನೆಲದಿಂದ ಕಾರ್ಯನಿರ್ವಹಿಸುತ್ತಿರುವ ಭಾರತ ವಿರೋಧಿ ಉಗ್ರಗಾಮಿ ಗುಂಪುಗಳ ವಿರುದ್ಧ ಪರಿಣಾಮಕಾರಿ ಕ್ರಮ ಕೈಗೊಳ್ಳುವಂತೆ ಭಾರತ, ಕೆನಡಾ ಸರ್ಕಾರವನ್ನು ಪದೇ ಪದೆ ಒತ್ತಾಯಿಸಿದೆ ಎಂದು ರಣಧೀರ್ ಜೈಸ್ವಾಲ್ ಹೇಳಿದರು.

---

ಬೆಂಗಳೂರು ಆಕಾಶವಾಣಿ ಕೇಂದ್ರವು ತನ್ನ ವೈಭವಯುತ ೯೦ ವರ್ಷಗಳ ಸಂಭ್ರಮಾಚರಣೆಯ ಅಂಗವಾಗಿ ನಾಳೆ 'ವಾಕಥಾನ್-೨೦೨೬' ಎಂಬ ವಿಶೇಷ ಜಾಥಾ ಆಯೋಜಿಸಿದೆ.

'೯೦ ವರ್ಷಗಳ ಸಾರ್ಥಕ ಧ್ವನಿ: ಸಂಸ್ಕೃತಿ ಹಾಗೂ ಸದಭಿರುಚಿಯ ಸಂಪರ್ಕ ಸೇತು' ಎಂಬ ಘೋಷವಾಕ್ಯದೊಂದಿಗೆ ನಡೆಯಲಿರುವ ಈ ಜಾಥಾ ನಾಳೆ ಬೆಳಗ್ಗೆ ೬:೩೦ಕ್ಕೆ ಬೆಂಗಳೂರಿನ ರಾಜಭವನ ರಸ್ತೆಯಲ್ಲಿರುವ ಆಕಾಶವಾಣಿ ಕೇಂದ್ರದಿಂದ ಪ್ರಾರಂಭವಾಗಲಿದೆ. ಈ ನಡಿಗೆಯು ಕಬ್ಬನ್ ಪಾರ್ಕ್ ಮೂಲಕ ವಿಧಾನ ಸೌಧದ ಮಾರ್ಗವಾಗಿ ಸಾಗಲಿದೆ.

ದಶಕಗಳ ಕಾಲ ನಾಡಿನ ಕಲೆ, ಸಾಹಿತ್ಯ ಮತ್ತು ಪರಂಪರೆಯನ್ನು ಮನೆ-ಮನೆಗೆ ತಲುಪಿಸಿದ ಆಕಾಶವಾಣಿಯ ಮೈಲಿಗಲ್ಲನ್ನು ಸ್ಮರಿಸಲು ಈ ವಾಕಥಾನ್ ಹಮ್ಮಿಕೊಳ್ಳಲಾಗಿದ್ದು, ಕಾರ್ಯಕ್ರಮಕ್ಕೆ ಎಲ್ಲರಿಗೂ ಆತ್ಮೀಯ ಆಹ್ವಾನ ನೀಡಲಾಗಿದೆ.

ನಾಡಿನ ಸಂಸ್ಕೃತಿ ಮತ್ತು ಸಾರ್ವಜನಿಕರ ನಡುವಿನ ಬಾಂಧವ್ಯವನ್ನು ಮತ್ತಷ್ಟು ಗಟ್ಟಿಗೊಳಿಸುವ ನಿಟ್ಟಿನಲ್ಲಿ ಆಯೋಜಿಸಲಾಗಿರುವ ಈ ವಿಶೇಷ ನಡಿಗೆಯಲ್ಲಿ ಆಕಾಶವಾಣಿ ಸಿಬ್ಬಂದಿ, ಕ್ರೀಡಾಪಟುಗಳು ಹಾಗೂ ನಾಗರಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವ ನಿರೀಕ್ಷೆಯಿದೆ.

---

ನವದೆಹಲಿಯಲ್ಲಿ ಇಂದು ವಿಯೆಟ್ನಾಂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ವು ಹೈ ಕ್ವಾನ್ ಅವರೊಂದಿಗೆ ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್ ದ್ವಿಪಕ್ಷೀಯ ಮಾತುಕತೆ ನಡೆಸಿದರು.

ಈ ವೇಳೆ ಉದಯೋನ್ಮುಖ ತಂತ್ರಜ್ಞಾನ, ನಾವೀನ್ಯತೆ, ಸಂಶೋಧನೆ ಮತ್ತು ಸ್ಟಾರ್ಟ್-ಅಪ್ ಪರಿಸರ ವ್ಯವಸ್ಥೆಗಳಲ್ಲಿ ಸಹಕಾರವನ್ನು ಮತ್ತಷ್ಟು ಗಾಢಗೊಳಿಸುವ ಕುರಿತು ಉಭಯ ನಾಯಕರು ಚರ್ಚಿಸಿದರು.

ಕೃತಕ ಬುದ್ಧಿಮತ್ತೆ, ಸೈಬರ್ ಭದ್ರತೆ, ನಾವೀನ್ಯತೆ ಪರಿಸರ ವ್ಯವಸ್ಥೆ ಮತ್ತು ತಂತ್ರಜ್ಞಾನ ವರ್ಗಾವಣೆ ಉಪಕ್ರಮಗಳಲ್ಲಿನ ಸಹಕಾರದ ಕುರಿತು ಉಭಯ ನಾಯಕರು ತಮ್ಮ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು.

ಸಭೆಯನ್ನುದ್ದೇಶಿಸಿ ಮಾತನಾಡಿದ ಡಾ. ಜಿತೇಂದ್ರ ಸಿಂಗ್, ಕಳೆದ ದಶಕದಲ್ಲಿ ಭಾರತ-ವಿಯೆಟ್ನಾಂ ನಡುವಿನ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯು ಹೊಸ ವೇಗವನ್ನು ಪಡೆದುಕೊಂಡಿದೆ. 'ಭಾರತ-ಆಸಿಯಾನ್ ಸಂಶೋಧನೆ ಮತ್ತು ತರಬೇತಿ ಫೆಲೋಶಿಪ್' ಕಾರ್ಯಕ್ರಮದ ಅಡಿಯಲ್ಲಿ ವಿಯೆಟ್ನಾಂನ ಹತ್ತು ಸಂಶೋಧಕರು ಫೆಲೋಶಿಪ್ ಪಡೆದಿದ್ದಾರೆ ಎಂದು ತಿಳಿಸಿದರು.

---

ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವ ಡಾ. ಮನ್ಸುಖ್ ಮಾಂಡವೀಯ ನವದೆಹಲಿಯಲ್ಲಿ ಇಂದು ಮಾರಿಷಸ್ ವಿದೇಶಾಂಗ ವ್ಯವಹಾರ ಮತ್ತು ಅಂತಾರಾಷ್ಟ್ರೀಯ ವ್ಯಾಪಾರ ಸಚಿವ ಧನಂಜಯ್ ರಾಮ್‌ಫುಲ್ ಅವರನ್ನು ಭೇಟಿಯಾದರು.

ಕಾರ್ಮಿಕರ ಕಲ್ಯಾಣ ಮತ್ತು ಉದ್ಯೋಗಕ್ಕಾಗಿ ಬಲಿಷ್ಠ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ ನಿರ್ಮಿಸಲು ಸಹಕರಿಸುವ ಬಗ್ಗೆ ಚರ್ಚೆ ನಡೆಸಲಾಯಿತು. ಭಾರತದ 'ನ್ಯಾಷನಲ್ ಕೆರಿಯರ್ ಸರ್ವಿಸ್' ಪೋರ್ಟಲ್ ಕಾರ್ಯಪಡೆಯನ್ನು ಸಬಲೀಕರಣಗೊಳಿಸಲು ತಂತ್ರಜ್ಞಾನವನ್ನು ಹೇಗೆ

ಬಳಸಿಕೊಳ್ಳುತ್ತಿದೆ ಎಂಬುದರ ಬಗ್ಗೆ ರಾಮ್‌ಫುಲ್ ಅವರು ವಿಶೇಷ ಆಸಕ್ತಿ ವ್ಯಕ್ತಪಡಿಸಿದರು ಎಂದು ಸಾಮಾಜಿಕ ಮಾಧ್ಯಮದಲ್ಲಿ ಸಚಿವ ಡಾ. ಮನ್ಸುಖ್ ಮಾಂಡವೀಯ ತಿಳಿಸಿದ್ದಾರೆ.

___________________

ಲಕ್ನೋದ ಭಾರತ ರತ್ನ ಅಟಲ್ ಬಿಹಾರಿ ವಾಜಪೇಯಿ ಏಕನಾ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಲಖನೌ ಸೂಪರ್ ಜೈಂಟ್ಸ್ ಮುಖಾಮುಖಿಯಾಗಿವೆ.

ಟಾಸ್ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು, ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

__________ ಮುಕ್ತಾಯ _________